ಕರ್ನಾಟಕ ಸರ್ಕಾರ

ಸಂಖ್ಯೆ: ಪಪೂಶಿ/ಶೈಶಾ/ನ.ಅಂ.ದೂ:01/2016-17

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಕ್ರಾಸ್, ಮಲ್ಲೇಶ್ವರಂ,
ಬೆಂಗಳೂರು-560012
ದಿನಾಂಕ: 24.10.2016

**ಅತಿಜರೂರು**

## ಜ್ಞಾಪನ

**ವಿಷಯ:** ನಕಲಿ ಅಂಕಪಟ್ಟಿಯನ್ನು ಸಲ್ಲಿಸಿ ಪದವಿ ಪೂರ್ವ ಕಾಲೇಜಿನಲ್ಲಿ ದಾಖಲಾತಿ ಮಾಡಿಕೊಂಡಿರುವ ಬಗ್ಗೆ
**ಉಲ್ಲೇಖ:** ಮಾಧ್ಯಮಗಳಲ್ಲಿ ಪ್ರಕಟಗೊಂಡ ಮಾಹಿತಿ

ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖದನ್ವಯ ಶಿವಮೊಗ್ಗ ಜಿಲ್ಲೆಯಲ್ಲಿ ನಕಲಿ ಅಂಕಪಟ್ಟಿ ಜಾಲವೊಂದು BOARD OF SECONDARY EDUCATION MAHARASHTRA ಹೆಸರಿನಲ್ಲಿ ತಯಾರಿಸುತ್ತಿರುವುದನ್ನು ಪತ್ತೆ ಮಾಡಲಾಗಿದೆ. ಈ ಕುರಿತು ವರದಿಯು ಟಿ ವಿ ವಾರ್ತೆ ಹಾಗೂ ದಿನಪತ್ರಿಕೆಯಲ್ಲಿ ಪ್ರಕಟಗೊಂಡಿರುತ್ತದೆ. ಕರ್ನಾಟಕ ರಾಜ್ಯದಲ್ಲಿನ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಸಗಿ ಅಭ್ಯರ್ಥಿಗಳು BOARD OF SECONDARY EDUCATION MAHARASHTRA ನೀಡಿರುವ ಅಂಕಪಟ್ಟಿಯನ್ನು ಹಾಜರುಪಡಿಸಿ ದಾಖಲಾಗುವುದನ್ನು ತಾತ್ಕಾಲಿಕವಾಗಿ ತಡೆಹಿಡಿಯಬೇಕು, ಆನ್‌ಲೈನ್‌ನಲ್ಲಿ ವಿದ್ಯಾರ್ಥಿಗಳ ದಾಖಲು ಮಾಡುವಿಕೆಯನ್ನು ತಾತ್ಕಾಲಿಕವಾಗಿ ನಿಲ್ಲಿಸಬೇಕು ಈಗಾಗಲೇ ದಾಖಲಾದ ವಿದ್ಯಾರ್ಥಿಗಳು ದಾಖಲಾತಿ ಸಮಯದಲ್ಲಿ ನೀಡಿರುವ ಎಲ್ಲಾ ದಾಖಲೆಗಳೊಂದಿಗೆ ಜಿಲ್ಲಾ ಉಪನಿರ್ದೇಶಕರು ಮರುಟಪಾಲಿನಲ್ಲಿ **ಜಂಟಿ ನಿರ್ದೇಶಕರು (ಶೈಕ್ಷಣಿಕ) ಪದವಿ ಪೂರ್ವ ಶಿಕ್ಷಣ ಇಲಾಖೆ ಮಲ್ಲೇಶ್ವರಂ, ಬೆಂಗಳೂರು** ಇಲ್ಲಿಗೆ ಸಲ್ಲಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ. ತಪ್ಪಿದ್ದಲ್ಲಿ ಮುಂದಿನ ಎಲ್ಲಾ ಆಗುಹೋಗುಗಳಿಗೆ ನಿಮ್ಮನ್ನೇ ಜವಾಬ್ದಾರರನ್ನಾಗಿ ಮಾಡಲಾಗುವುದು.

24/10

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

ಗೆ,

ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರಿಗೆ – ಜಿಲ್ಲೆಯ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ ಅವಗಾಹನೆಗೆ ತರಲು ಈ ಮೂಲಕ ತಿಳಿಸಿದೆ.

ಪ್ರತಿಯನ್ನು

1. ನಿರ್ದೇಶಕರ ಆಪ್ತ ಶಾಖೆಗೆ – ಅವಗಾಹನೆಗಾಗಿ
2. ಜಂಟಿ ನಿರ್ದೇಶಕರು (ಶೈಕ್ಷಣಿಕ) ಪ.ಪೂ.ಶಿ.ಇ. ಬೆಂಗಳೂರು– ಮಾಹಿತಿಗಾಗಿ
3. ಜಂಟಿ ನಿರ್ದೇಶಕರು (ಪರೀಕ್ಷೆ) ಪ.ಪೂ.ಶಿ.ಇ. ಬೆಂಗಳೂರು– ಮಾಹಿತಿಗಾಗಿ
4. ಕಛೇರಿ ಪ್ರತಿ